ಸರ್ಕಾರದ ಮುಂದಿದೆಯೇ?

ಆ) ಬಹುದಿನಗಳ ಬೇಡಿಕೆಯಾದ ಮಹಿಳಾ ವಿಶ್ವವಿದ್ಯಾಲಯವನ್ನು ಹುಬ್ಬಳ್ಳಿ ನಗರದಲ್ಲಿ ಯಾವ ಸಾಲಿನಿಂದ ಪ್ರಾರಂಭ ಮಾಡಲಾಗುವುದು?

ಇ) ಮಹಿಳಾ ವಿಶ್ವವಿದ್ಯಾಲಯಕ್ಕೆ ಆಯ್ಕೆ ಮಾಡಿದ ಸ್ಥಳ ಯಾವುದು?

ಈ) ಮಹಿಳಾ ವಿಶ್ವವಿದ್ಯಾಲಯದ ಕಾರ್ಯವ್ಯಾಪ್ತಿ ಎಷ್ಟು ಜಿಲ್ಲೆಗಳಿಗೆ ಅನ್ವಯವಾಗುತ್ತದೆ ಇಲ್ಲವಾದಲ್ಲಿ ಕಾರಣವೇನು?

ಉತ್ತರ

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಅನ್ವಯಿಸುವುದಿಲ್ಲ.

ಧಾರವಾಡ ಜಿಲ್ಲೆಯಲ್ಲಿ ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆ

ಚುಕ್ಕೆ ರಹಿತ ಪ್ರಶ್ನೆ: 1116(1328)

ಸದಸ್ಯರ ಹೆಸರು: ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್(ಹುಬ್ಬಳ್ಳಿ)

ಉತ್ತರಿಸುವ ಸಚಿವರು: ಶ್ರೀ ಎಂ.ವೈ.ಘೋರ್ಪಡೆ(ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು)

ಪ್ರಶ್ನೆ

1. ಧಾರವಾಡ ಜಿಲ್ಲೆಯಲ್ಲಿ ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆಯಡಿಯಲ್ಲಿ 2001-02ನೇ ಸಾಲಿನಲ್ಲಿ ಯಾವ ಯಾವ ರಸ್ತೆ ಆಯ್ದುಕೊಳ್ಳಲಾಗಿದೆ?

2. ಇದಕ್ಕಾಗಿ ಒಟ್ಟು ಎಷ್ಟು ಹಣ ಮೀಸಲಿಡಲಾಗಿದೆ?

3. ಮಂಜೂರು ಮಾಡಿದ ಹಣ ಬಿಡುಗಡೆ ಮಾಡಲಾಗಿದೆಯೇ? ಅಥವಾ ಇಲ್ಲವೆ?

4. ಇಲ್ಲವಾದಲ್ಲಿ ಕಾರಣವೇನು?

ಉತ್ತರ

1. 2001-02ನೇ ಸಾಲಿನ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ಕೇಂದ್ರ ಸರ್ಕಾರದ ಅನುಮೋದನಾ ಹಂತದಲ್ಲಿದೆ.

2. ಯೋಜನಾ ವರದಿ ಮಂಜೂರಾದ ನಂತರ ಹಣ ಒದಗಿಸಲಾಗುವುದು.

3. ಉದ್ಭವಿಸುವುದಿಲ್ಲ.

4. ಉದ್ಭವಿಸುವುದಿಲ್ಲ.

ಜಯದೇವ ಹೃದ್ರೋಗ ಆಸ್ಪತ್ರೆ ಕುರಿತು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1117(1365)

ಸದಸ್ಯರ ಹೆಸರು: ಶ್ರೀ ಜಗದೀಶ್ ಶೆಟ್ಟರ್(ಹುಬ್ಬಳ್ಳಿ ಗ್ರಾಮೀಣ)

ಉತ್ತರಿಸುವ ಸಚಿವರು: ಡಾ॥ಜಿ.ಪರಮೇಶ್ವರ(ಉನ್ನತ ಶಿಕ್ಷಣ ಮತ್ತು ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು)

ಪ್ರಶ್ನೆ

ಅ) ಬನ್ನೇರುಘಟ್ಟ ರಸ್ತೆಯಲ್ಲಿ ನಿರ್ಮಿಸಿರುವ ಜಯದೇವ ಹೃದ್ರೋಗ ಆಸ್ಪತ್ರೆಯ ನಿರ್ಮಾಣಕ್ಕೆ ತಗುಲಿದ ಒಟ್ಟು ವೆಚ್ಚ ಎಷ್ಟು? ಯಂತ್ರೋಪಕರಣಗಳಿಗೆ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ.?

ಆ) ಈ ಆಸ್ಪತ್ರೆ ಎಂದಿನಿಂದ ಕಾರ್ಯಾರಂಭ ಮಾಡಲಾಗುವುದು?

ಇ) ಈ ಆಸ್ಪತ್ರೆಯ ಒಂದು ಭಾಗವನ್ನು ಖಾಸಗಿಯವರಿಗೆ ಪರಭಾರೆ ಮಾಡಲು ಉದ್ದೇಶಿಸಿರುವುದು ನಿಜವೇ? ಹಾಗಿದ್ದಲ್ಲಿ ಇದಕ್ಕೆ ಕಾರಣಗಳೇನು? ಇಂತಹ ಸುಸಜ್ಜಿತ ಆಸ್ಪತ್ರೆಯ ಕಟ್ಟಡವನ್ನು ಖಾಸಗಿಯವರಿಗೆ ವಹಿಸುವುದು ಎಷ್ಟು ಸಮಂಜಸ?

ಉತ್ತರ

ಅ) ಆಸ್ಪತ್ರೆ ನಿರ್ಮಾಣಕ್ಕೆ 31-12-2001ರ ಅಂತ್ಯಕ್ಕೆ ರೂ.40.16 ಕೋಟಿಗಳು